# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ನಸ್ರುಲ್ಲಾಖಾನ್ ಬಿನ್ ಅಬ್ದುಲ್ ರೆಹಮಾನ ಸದಸ್ಯರು ಇವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ರನ್ವಯ ಕ್ರಮ ಕೈಗೊಳ್ಳುವ ಬಗ್ಗೆ.

**ಓದಲಾಗಿದೆ:**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮೈಸೂರು ಜಿಲ್ಲೆ ರವರ ಪತ್ರ ಸಂಖ್ಯೆ ಡಿಇವಿ.3/429/2015-16 ದಿನಾಂಕ:22-07-2016.
2. ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 762 ಗ್ರಾಪಂಅ 2016 ದಿನಾಂಕ: 31-08-2016 ರ ಕಾರಣ ಕೇಳುವ ನೋಟೀಸ್.
3. ಶ್ರೀ ನಸ್ರುಲ್ಲಾ ಖಾನ್ ರವರ ಲಿಖಿತ ಹೇಳಿಕೆ ದಿನಾಂಕ:27-09-2016
4. ವಿಚಾರಣಾ ತಿಳುವಳಿಕೆ ಪತ್ರ ದಿನಾಂಕ: 11-01-2017, 27-01-2017

**ಪ್ರಸ್ತಾವನೆ :**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ದಿನಾಂಕ: 22-07-2016 ರ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮೈಸೂರು ಜಿಲ್ಲೆ ರವರ ಪತ್ರದಲ್ಲಿ ಶ್ರೀ ನಸ್ರುಲ್ಲಾಖಾನ್ ಬಿನ್ ಅಬ್ದುಲ್ ರೆಹಮಾನ ಸದಸ್ಯರು, ಡೊಡ್ಡಕವಲಂದೆ ಗ್ರಾಮ ಪಂಚಾಯತಿ, ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ ಇವರು ದಿನಾಂಕ: 14-03-2016 ರಂದು ನಡೆದ ಗ್ರಾಮ ಪಂಚಾಯತಿ ಸಾಮಾನ್ಯ ಸಭೆಯಲ್ಲಿ ಉಪಾಧ್ಯಕ್ಷರಾದ ಶ್ರೀ ಜಾವಿದ್ ಅಹಮ್ಮದ್ ರವರ ಕೆನ್ನೆಗೆ ಹೊಡೆದಿರುವ ಈ ದುರ್ನಡತೆಯ ಬಗ್ಗೆ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43-ಎ ರಂತೆ ಕ್ರಮ ಕೈಗೊಳ್ಳುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮೈಸೂರು ಜಿಲ್ಲೆ ರವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಶ್ರೀ ನಸ್ರುಲ್ಲಾಖಾನ್ ಬಿನ್ ಅಬ್ದುಲ್ ರೆಹಮಾನ ಸದಸ್ಯರು, ಡೊಡ್ಡಕವಲಂದೆ ಗ್ರಾಮ ಪಂಚಾಯತಿ, ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ ಇವರಿಗೆ ದಿನಾಂಕ: 31-08-2016 ರಂದು ಕಾರಣ ಕೇಳುವ ನೋಟೀಸ್ ಜಾರಿಗೊಳಿಸಲಾಗಿದ್ದು, ಸದರಿ ಕಾರಣ ಕೇಳುವ ನೋಟೀಸಿಗೆ ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ಶ್ರೀ ನಸ್ರುಲ್ಲಾಖಾನ್ ಬಿನ್ ಅಬ್ದುಲ್ ರೆಹಮಾನ, ರವರ ದಿನಾಂಕ: 27-09-2016 ರಂದು ಲಿಖಿತ ಉತ್ತರ ನೀಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4) ರಲ್ಲಿ ಶ್ರೀ ನಸ್ರುಲ್ಲಾಖಾನ್ ಬಿನ್ ಅಬ್ದುಲ್ ರೆಹಮಾನ ಸದಸ್ಯರು, ಡೊಡ್ಡಕವಲಂದೆ ಗ್ರಾಮ ಪಂಚಾಯತಿ, ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ ಇವರು ವಿಚಾರಣೆಗೆ ಹಾಜರಾಗಲು ತಿಳುವಳಿಕೆ ಪತ್ರ ನೀಡಲಾಗಿದ್ದು, ಸದರಿಯವರು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ಇವರ ನ್ಯಾಯಾಲಯದಲ್ಲಿ ನಡೆದ ಮೌಖಿಕ ವಿಚಾರಣೆಗೆ ಹಾಜರಾಗಿರುತ್ತಾರೆ.

ಪ್ರಕರಣಕ್ಕೆ ಸಂಬಂಧಪಟ್ಟ ದಾಖಲಾತಿಗಳನ್ನು ಪರಿಶೀಲಿಸಲಾಯಿತು. ಶ್ರೀ ನಸ್ರುಲ್ಲಾಖಾನ್ ಬಿನ್ ಅಬ್ದುಲ್ ರೆಹಮಾನ ಸದಸ್ಯರು, ಡೊಡ್ಡಕವಲಂದೆ ಗ್ರಾಮ ಪಂಚಾಯತಿ, ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ ರವರ ದುರ್ವರ್ತನೆ ಸಾಬೀತಾಗಿರುವುದು ಕಂಡು ಬಂದಿರುವುದರಿಂದ ಸದರಿಯವರನ್ನು ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರಂತೆ ಡೊಡ್ಡಕವಲಂದೆ ಗ್ರಾಮ ಪಂಚಾಯತಿ ಸದಸ್ಯತ್ವದಿಂದ ತೆಗೆದುಹಾಕಲು ಸರ್ಕಾರವು ನಿರ್ಣಯಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/762/ಗ್ರಾಪಂಅ/2016**
**ಬೆಂಗಳೂರು, ದಿನಾಂಕ: 16-10-2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ನಸ್ರುಲ್ಲಾಖಾನ್ ಬಿನ್ ಅಬ್ದುಲ್ ರೆಹಮಾನ ಸದಸ್ಯರು, ಡೊಡ್ಡಕವಲಂದೆ ಗ್ರಾಮ ಪಂಚಾಯತಿ, ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ ಇವರು ದಿನಾಂಕ: 14-03-2016 ರಂದು ನಡೆದ ಗ್ರಾಮ ಪಂಚಾಯತಿ ಸಾಮಾನ್ಯ ಸಭೆಯಲ್ಲಿ ಉಪಾಧ್ಯಕ್ಷರಾದ ಶ್ರೀ ಜಾವಿದ್ ಅಹಮ್ಮದ್ ರವರ ಕೆನ್ನೆಗೆ ಹೊಡೆದಿರುವ ದುರ್ನಡತೆಯು ಸಾಬೀತಾಗಿರುವುದರಿಂದ ಇವರನ್ನು

ತಕ್ಷಣದಿಂದ ಜಾರಿಗೆ ಬರುವಂತೆ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ರನ್ವಯ ಡೊಡ್ಡಕವಲಂದೆ ಗ್ರಾಮ ಪಂಚಾಯತಿಯ ಸದಸ್ಯತ್ವ ಸ್ಥಾನದಿಂದ ತೆಗೆದುಹಾಕಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

13/10/17
(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಗಳು:**

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮೈಸೂರು ಜಿಲ್ಲೆ,
2) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ
3) ಶ್ರೀ ನಸ್ರುಲ್ಲಾಖಾನ್ ಬಿನ್ ಅಬ್ದುಲ್ ರೆಹಮಾನ ಸದಸ್ಯರು, ಡೊಡ್ಡಕವಲಂದೆ ಗ್ರಾಮ ಪಂಚಾಯತಿ, ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ
4) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಡೊಡ್ಡಕವಲಂದೆ ಗ್ರಾಮ ಪಂಚಾಯತಿ, ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ
5) ಗಣಕ ಕೋಶ.
6) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.